ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20 ದಿನಾಂಕ : 12–09–2019

## ಪತ್ರಿಕಾ ಆಮಂತ್ರಣ

1. ಬ್ರಹ್ಮಶ್ರೀ ನಾರಾಯಣಗುರು ಜಯಂತಿ :

ಉದ್ಘಾಟನೆ :

ಬಿ.ಎಸ್. ಯಡಿಯೂರಪ್ಪ,

ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಘನ ಉಪಸ್ಥಿತಿ :

ಡಿ.ವಿ. ಸದಾನಂದಗೌಡ,

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು,

ಮುಖ್ಯ ಅತಿಥಿಗಳು :

ಗೋವಿಂದ ಎಂ. ಕಾರಜೋಳ,

ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಇಲಾಖೆ ಸಚಿವರು

ಡಾ: ಸಿ.ಎನ್. ಅಶ್ವತ್ಥ್‌ನಾರಾಯಣ್,

ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ

ಇಲಾಖೆ ಸಚಿವರು

ಶ್ರೀ ಲಕ್ಷ್ಮಣ್ ಸಂಗಪ್ಪ ಸವದಿ,

ಉಪ ಮುಖ್ಯಮಂತ್ರಿಗಳು, ಹಾಗೂ ಸಾರಿಗೆ ಸಚಿವರು

ದಿನಾಂಕ : 13–09–2019 ಶುಕ್ರವಾರ ಸಂಜೆ : 6–00 ಗಂಟೆಗೆ

**ಸ್ಥಳ : ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು**

**ಪತ್ರಿಕಾ ಪ್ರಕಟಣೆ**

## ಮಾಜಿ ಸೈನಿಕರ ಮಕ್ಕಳಿಗೆ ಪ್ರಧಾನಮಂತ್ರಿಗಳ ಶಿಷ್ಯವೇತನ

**ಬೆಂಗಳೂರು, ಸೆಪ್ಟೆಂಬರ್ 12 ( ಕರ್ನಾಟಕ ವಾರ್ತೆ ) :**

2019-20 ನೇ ಸಾಲಿನ ಪ್ರಧಾನ ಮಂತ್ರಿಗಳ ಶಿಷ್ಯವೇತನವನ್ನು ವೃತ್ತಿಪರ ಪದವಿ ತರಗತಿಯಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರುವ ಮಾಜಿ ಸೈನಿಕರ ಮಕ್ಕಳಿಗೆ ಮಂಜೂರು ಮಾಡುವ ಬಗ್ಗೆ ಕೇಂದ್ರೀಯ ಸೈನಿಕ ಬೋರ್ಡ್‌ನಿಂದ ಸುತ್ತೋಲೆ ಹೊರಡಿಸಿದ್ದು ಅದರ ವಿವರಗಳನ್ನು ಪಡೆಯಲು ಸಂಬಂಧಪಟ್ಟ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು www.ksp.gov.in ವೆಬ್‌ಸೈಟ್ ಅನ್ನು ಸಂಪರ್ಕಿಸುವಂತೆ ತಿಳಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ನವೆಂಬರ್ 15 ಆಗಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ಅಂಚೆ ಅದಾಲತ್

**ಬೆಂಗಳೂರು, ಸೆಪ್ಟೆಂಬರ್ 12 ( ಕರ್ನಾಟಕ ವಾರ್ತೆ ) :**

ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆ ವ್ಯಾಪ್ತಿಗೆ ಸಂಬಂಧಪಟ್ಟ ಅಂಚೆ ಸೇವೆಗಳ ಕುಂದು ಕೊರತೆಗಳು, ಅಹವಾಲುಗಳನ್ನು ಪರಿಹರಿಸಲು ಅಂಚೆ ಅದಾಲತ್ (ಡಾಕ್ ಅದಾಲತ್) ಅನ್ನು 25-9-2019 ರ ಮಧ್ಯಾಹ್ನ 3-00 ಗಂಟೆಗೆ ವರಿಷ್ಠ ಅಂಚೆ ಅಧೀಕ್ಷಕರ ಕಚೇರಿ, ಬೆಂಗಳೂರು ಪೂರ್ವ ಅಂಚೆ ವಿಭಾಗ, ಮ್ಯೂಸಿಯಂ ರಸ್ತೆ, ಅಂಚೆ ಕಚೇರಿ, ಬೆಂಗಳೂರು -25 ಇಲ್ಲಿ ಆಯೋಜಿಸಲಾಗಿದೆ.

ಸಾರ್ವಜನಿಕರು ಅಂಚೆ ಸೇವೆಗಳ ಬಗ್ಗೆ ತಮಗಿರುವ ಕುಂದುಕೊರತೆಗಳನ್ನು ತಮ್ಮ ಸಂಪೂರ್ಣ ಹಾಗೂ ಸಂಪರ್ಕ ವಿಳಾಸದೊಂದಿಗೆ ತ್ವರಿತ ಪರಿಹಾರಕ್ಕಾಗಿ ಸಹಾಯಕ ನಿರ್ದೇಶಕರು, ಪೋಸ್ಟ್ ಮಾಸ್ಟರ್ ಜನರಲ್ ಕಾರ್ಯಾಲಯ, ನಂ. 1 ಅರಮನೆ ರಸ್ತೆ, ಬೆಂಗಳೂರು –1 ದೂರವಾಣಿ 080– 22392556, 22392583 ವಿಳಾಸಕ್ಕೆ ಸೆಪ್ಟೆಂಬರ್ 20 ರೊಳಗೆ ತಲುಪುವಂತೆ ಕಳುಹಿಸಿಕೊಡಲು ಕೋರಲಾಗಿದೆ. ತಮ್ಮ ಕುಂದುಕೊರತೆಗಳನ್ನು ಇಮೇಲ್ ಮೂಖಾಂತರವೂ ಸಹ tech.karbg@indiapost.gov.in ಕಳುಹಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅವಧಿ ವಿಸ್ತರಣೆ

**ಬೆಂಗಳೂರು, ಸೆಪ್ಟೆಂಬರ್ 12 (ಕರ್ನಾಟಕ ವಾರ್ತೆ) :**

**ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಪುರುಷ) ಡೈರಿ ವೃತ್ತ, ಹೊಸೂರು ರಸ್ತೆ, ಬೆಂಗಳೂರು–29 ಇಲ್ಲಿ ವಿವಿಧ ವೃತ್ತಿಗಳಲ್ಲಿ ಆನ್‌ಲೈನ್ ಪ್ರವೇಶಾತಿಯ ನಂತರ ಉಳಿಕೆಯಾಗಿರುವ ಸ್ಥಾನಗಳನ್ನು ಅಂತಿಮ ಸುತ್ತಿನಲ್ಲಿ ಭರ್ತಿ ಮಾಡಲು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಭರ್ತಿಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಅಂತಿಮ ದಿನಾಂಕವನ್ನು ದಿನಾಂಕ: 16–09–2019 ರ ವರೆಗೆ ವಿಸ್ತರಿಸಲಾಗಿದೆ.**

**ಅಭ್ಯರ್ಥಿಗಳು ಸಂಸ್ಥೆಯ ಕಛೇರಿಯಲ್ಲಿ ಪ್ರವೇಶ ಅರ್ಜಿಗಳನ್ನು ಪಡೆಯಬಹುದಾಗಿದೆ. ಸಮರ್ಪಕವಾಗಿ ಭರ್ತಿಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ: 16–09–2019. ಆಗಿರುತ್ತದೆ. ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಅಭ್ಯರ್ಥಿಗಳಿಗೆ ವಿವಿಧ ವೃತ್ತಿಗಳಲ್ಲಿ ಖಾಲಿ ಇರುವ ಸ್ಥಾನಗಳನ್ನು ಪ್ರವೇಶಾತಿಯ ನಿಯಮಾನುಸಾರ ಹಂಚಿಕೆ ಮಾಡಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## NTSE & NMMS ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 12 ( ಕರ್ನಾಟಕ ವಾರ್ತೆ ) :**

**2019–20 ನೇ ಸಾಲಿನಿಂದ NTSE & NMMS ಪರೀಕ್ಷೆಗಳನ್ನು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸಲಾಗುತ್ತಿದ್ದು, NTSE ಪರೀಕ್ಷೆಯನ್ನು 10 ನೇ ತರಗತಿಯಲ್ಲಿ ಪ್ರಸಕ್ತ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಶಾಲೆಗಳ ವಿದ್ಯಾರ್ಥಿಗಳು ಹಾಗೂ NMMS ಪರೀಕ್ಷೆಯನ್ನು 8 ನೇ ತರಗತಿಯಲ್ಲಿ ಪ್ರಸಕ್ತ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ, ಅನುದಾನಿತ ಮತ್ತು ಸ್ಥಳೀಯ ಸಂಸ್ಥೆಗಳ**

**ಶಾಲೆಗಳಲ್ಲಿನ ವಿದ್ಯಾರ್ಥಿಗಳು ಬರೆಯಬಹುದಾಗಿರುತ್ತದೆ. ಸದರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಅರ್ಜಿಯನ್ನು ಆನ್‌ಲೈನ್ ನಲ್ಲಿ www.kseeb.kar.nic.in ವೆಬ್‌ಸೈಟ್ ಮೂಲಕ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 25 ಕೊನೆಯದಿನವಾಗಿರುತ್ತದೆ ಎಂದು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತಿನ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಸಚಿವರ ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 12 ( ಕರ್ನಾಟಕ ವಾರ್ತೆ ) :**

**ಶ್ರೀ ಜಗದೀಶ ಶೆಟ್ಟರ, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಸೆಪ್ಟೆಂಬರ್ 14 ರಿಂದ 15 ರವರೆಗೆ ಹುಬ್ಬಳ್ಳಿಯಲ್ಲಿ ಪ್ರವಾಸ ಕೈಗೊಳ್ಳುವರು.**

## Application Invited

Bengaluru, September 12 (Karnataka Information)

Kendriya Sainik Board has invited online application to sanction Prime Minister's Scholarship for the year 2019-20 towards Ex-servicemen who have joined the first year of professional courses. Ex-servicemen/dependents are hereby informed to visit Website : www.ksp.gov.in for detailed information. Last date to submit application through online is November 15.

## DAK ADALAT

Bengaluru, September 12 (Karnataka Information)

"DAK ADALAT" for redressal of public grievances relating to Postal Services scheduled to be held on 25th September 2019 at 3 P.M. at the Office of the Sr. Superintendent of Post Offices, Bengaluru East Division, Museum Road Post Office Building, Bengaluru-25. Members

of the public and esteemed customers of Department of Posts in Bengaluru Region may address their grievances if any, to the Assistant Director (II) Office of the Postmaster General, Bengaluru Hq Region, Bengaluru-1, so as to reach this office latest by 20th September 2019. Grievances can also be sent by e-mail to tech.karbg@indiapost.gov.in It is requested that brief and specific details with relevant facts and figures may please be furnished along with complete contact details to facilitate speedy redressal says official press release.